ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಪ್ರಶಸ್ತಿ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 20/10/2019

# ದುಬೈ ಕನ್ನಡರತ್ನ ಸುಧಾಮೂರ್ತಿಗೆ ಪ್ರಶಸ್ತಿ

20/10/19



ಸಂ.ಕ ಸಮಾಚಾರ ಬೆಂಗಳೂರು

ದುಬೈ ಕನ್ನಡಿಗರು ನೀಡುವ ಕನ್ನಡ ರತ್ನ ಪ್ರಶಸ್ತಿಗೆ ಇನ್ಫೋಸಿಸ್ ಫೌಂಡೇಶನ್ ಅಧ್ಯಕ್ಷೆ ಸುಧಾಮೂರ್ತಿ ಭಾಜನರಾಗಿದ್ದಾರೆ.

ದುಬೈ ಕನ್ನಡಿಗರ ಸಂಘದ ಮುಖ್ಯ ಸಂಚಾಲಕ ಮಲ್ಲಿಕಾರ್ಜುನ ಗೌಡ ಈ ವಿಷಯ ತಿಳಿಸಿದ್ದು, 64ನೇ ರಾಜ್ಯೋತ್ಸವವನ್ನು ನ.8ರಂದು ಆಚರಿಸುತ್ತಿದೆ. ಇದು 16ನೇ ದುಬೈ ಕನ್ನಡ ರಾಜ್ಯೋತ್ಸವ. ಈ ಬಾರಿಯ ಕನ್ನಡ ರತ್ನ ಪ್ರಶಸ್ತಿಯನ್ನು ಸುಧಾಮೂರ್ತಿ ಅವರಿಗೆ ನೀಡಲು ನಿರ್ಧರಿಸಲಾಗಿದೆ ಎಂದರು. ಅಂದು ಸಂಜೆ 4.30ಕ್ಕೆ ದುಬೈ ಮೇದಾನ್ ನಾದ್ ಅಲ್ ಶೀಬಾದಲ್ಲಿರುವ ಹಾರ್ಟ್‌ಲ್ಯಾಂಡ್ ಇಂಟರ್ ನ್ಯಾಷನಲ್ ಶಾಲೆಯಲ್ಲಿ ನಡೆಯಲಿರುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದರು.

ಸಮಾರಂಭಕ್ಕೆ ದುಬೈನಲ್ಲಿರುವ ಭಾರತದ ರಾಯಭಾರಿ ವಿಪುಲ್, ಕಾರ್ಗಿಲ್ ಯುದ್ಧದಲ್ಲಿ ಭಾಗಿಯಾಗಿದ್ದ ಕ್ಯಾಪ್ಟನ್ ನವೀನ್ ನಾಗಪ್ಪ, ಉದ್ಯಮಿ ಮುಸ್ತಾಫಾ ಮಹಮ್ಮದ್, ಫಾರ್ಚ್ಯೂನ್ ಹೋಟೆಲ್ಸ್ ಗ್ರೂಪಿನ ಮುಖ್ಯಸ್ಥ ರವೀಶಗೌಡ ಮತ್ತು ದರ್ಶಿನಿ ಮಂಜುನಾಥ್ ಮೊದಲಾದವರು ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಇದೇ ಸಂದರ್ಭದಲ್ಲಿ ದಿಷಾ ಟ್ರಸ್ಟ್ ಅವರಿಂದ ನೃತ್ಯ, ದುಬೈನಲ್ಲಿರುವ ಕನ್ನಡ ಶಾಲಾ ಮಕ್ಕಳಿಂದ ನೃತ್ಯ, ಸಂಗೀತ ಕಾರ್ಯಕ್ರಮಗಳು ನಡೆಯಲಿವೆ ಎಂದು ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಕನ್ನಡಿಗರು ದುಬೈ ಸಂಘದ ಪದಾಧಿಕಾರಿಗಳಾದ ವೀರೇಂದ್ರ ಬಾಬು, ಸದನ್ ದಾಸ್, ಉಮಾ ವಿದ್ಯಾಧರ್, ಅರುಣಕುಮಾರ್, ದೀಪಕ್ ಸೋಮಶೇಖರ್, ಚಂದ್ರಕಾಂತಗೌಡ, ವಿಜಯ ಶಿವರುದ್ರಪ್ಪ, ಮಮತಾ ರಾಘವೇಂದ್ರ, ಮಲ್ಲಿಕಾರ್ಜುನ ಅಂಗಡಿ, ಶ್ರೀನಿವಾಸ್ ಅರಸ್, ವೆಂಕಟರಮಣ ಕಾಮತ್, ರಫೀಕಲಿ ಕೊಡಗು, ವಿನೀತ್ ರಾಜ್, ಮಧು ಗೌಡ, ಚಂದ್ರಶೇಖರ್ ಪೂಜಾರಿ, ಸತೀಶ್ ಹೈಂದರ್, ಪ್ರಕಾಶ್ ಪಯ್ಯಾರ್, ಮನೋಹರ್ ಹೆಗಡೆ, ಸುಗಂಧರಾಜ್ ಬೇಕಲ್, ಸುಮೀಂದ್ರ ಹೇಮಾದ್ರಿ, ಆಶಾಲಕ್ಷ್ಮಿ, ಖಲೀಲ್ ರೆಹಮಾನ್,

ಉದಯ್ ನಂಜಪ್ಪ, ಬಾನುಕುಮಾರ್, ನಾಗರಾಜರಾವ್ ಮೊದಲಾದವರು ಉಪಸ್ಥಿತರಿದ್ದರು.

5